ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ: 080-22343904, 22343905.

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು - 560 001.

ಸಂಖ್ಯೆ: ಕಾಶಿಇ/ಶೈವಿ/47/ಸುತ್ತೋಲೆ/2016-17(ಭಾಗ-2)

ದಿನಾಂಕ:15.05.2017

# ಸುತ್ತೋಲೆ

**ವಿಷಯ:** 2017ರ ಮೇ 21ರಂದು "ಭಯೋತ್ಪಾದನಾ ವಿರೋಧಿ ದಿನ" ಆಚರಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪತ್ರ ಸಂಖ್ಯೆ: ಸಿಆಸುಇ/10/ರಾರಾಆ/2017, ದಿ:08.05.2017.

* * * * * *

ಪ್ರತಿ ವರ್ಷ ಮೇ 21ನೇ ದಿನಾಂಕದಂದು "ಭಯೋತ್ಪಾದನಾ ವಿರೋಧಿ ದಿನ" ವನ್ನಾಗಿ ಆಚರಿಸಲಾಗುತ್ತಿದ್ದು, ಅದರಂತೆ ಈ ವರ್ಷವೂ ಸಹ ಮೇ 21 ರಂದು ಭಯೋತ್ಪಾದನಾ ವಿರೋಧಿ ದಿನ' ಆಚರಿಸಲು ಉದ್ದೇಶಿಸಲಾಗಿದೆ. ಈ ವರ್ಷ ದಿನಾಂಕ:21-05-2017 ಭಾನುವಾರವಾಗಿದ್ದು, ಸಾರ್ವತ್ರಿಕ ರಜಾ ದಿನವಾಗಿರುವುದರಿಂದ ಅದರ ಹಿಂದಿನ ದಿನ ದಿನಾಂಕ:20-05-2017ರ ಶನಿವಾರದಂದು 'ಭಯೋತ್ಪಾದನಾ ವಿರೋಧಿ ದಿನ' ಆಚರಿಸುವಂತೆ ಸೂಚಿಸಲಾಗಿದೆ. ಈ ಸಂಬಂಧ, 'ಭಯೋತ್ಪಾದನಾ ವಿರೋಧಿ ದಿನ'ದ ಪ್ರತಿಜ್ಞಾ ವಚನದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿ, ಕಳುಹಿಸುತ್ತಾ, ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ, ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳಲ್ಲಿ "ಭಯೋತ್ಪಾದನಾ ವಿರೋಧಿ ದಿನ" ಆಚರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

Shilpa

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ,

1) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2) ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಪ್ರಾದೇಶಿಕ ಜಂಟಿ ನಿರ್ದೇಶಕರ ಮೂಲಕ)

**ಪ್ರತಿಯನ್ನು:**

1) ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು-560001.
2) ಕಛೇರಿ ಪ್ರತಿ.

ಪು.ತಿ.ನೋ. . . . .

# ಭಯೋತ್ಪಾದನಾ ವಿರೋಧಿ ದಿನದ

# ಪ್ರಮಾಣ ವಚನ

"ಅಹಿಂಸೆ ಹಾಗೂ ಸಹನೆಗೆ ಹೆಸರಾದ ನಮ್ಮ ರಾಷ್ಟ್ರದ ಭವ್ಯ ಪರಂಪರೆಯಲ್ಲಿ ದೃಢ ವಿಶ್ವಾಸವುಳ್ಳ ಭಾರತದ ಪ್ರಜೆಗಳಾದ ನಾವು ಎಲ್ಲಾ ಬಗೆಯ ಭಯೋತ್ಪಾದನೆ ಮತ್ತು ಹಿಂಸೆಯನ್ನು ನಮ್ಮೆಲ್ಲ ಶಕ್ತಿ ಸಾಮರ್ಥ್ಯದಿಂದ ಎದುರಿಸುತ್ತೇವೆಂದು ಈ ಮೂಲಕ ಶ್ರದ್ಧಾಪೂರ್ವಕವಾಗಿ ಪ್ರತಿಜ್ಞೆ ಮಾಡುತ್ತೇವೆ. ನಮ್ಮ ಸಹಭಾಂಧವರಲ್ಲಿ ಶಾಂತಿ ಸಾಮಾಜಿಕ ಸೌಹಾರ್ದತೆ ಮತ್ತು ಪರಸ್ಪರ ಅರಿವನ್ನು ಸಾಧಿಸಲು ಹಾಗೂ ಉತ್ತೇಜಿಸಲು ಮತ್ತು ಮಾನವ ಜೀವಕ್ಕೆ ಹಾಗೂ ಮೌಲ್ಯಗಳಿಗೆ ಬೆದರಿಕೆಯೊಡ್ಡುತ್ತಿರುವ ವಿಚ್ಛಿದ್ರಕಾರಿ ಶಕ್ತಿಗಳ ವಿರುದ್ಧ ಹೋರಾಡಲು ನಾವು ಪಣ ತೊಡುತ್ತೇವೆ."